# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **808**

ಸದಸ್ಯರ ಹೆಸರು : **ಶ್ರೀ. ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

ಉತ್ತರಿಸುವ ದಿನಾಂಕ : **19/08/2025**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಪುರಸಭೆಯನ್ನು ನಗರಸಭೆಯನ್ನಾಗಿ ಹಾಗೂ ರಾಜೇಶ್ವರ ಗ್ರಾಮ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಂದ ಸ್ವೀಕೃತವಾದ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಬೀದರ್ ಜಿಲ್ಲೆಯ ಹುಮನಾಬಾದ್ ಪುರಸಭೆಯಿಂದ ನಗರಸಭೆಯನ್ನು ರಚಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಿ, ಸಹಮತಿ ಕೋರಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ.<br><br>ಪ್ರಸ್ತುತ ರಾಜೇಶ್ವರ ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಯನ್ನು ರಚಿಸುವುದಕ್ಕಾಗಿ ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರು ಪ್ರಸ್ತಾವನೆಯನ್ನು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಗೆ ಸಲ್ಲಿಸಿದ್ದು, ಪ್ರಸ್ತುತ ನಿರ್ದೇಶನಾಲಯದಲ್ಲಿ ಪರಿಶೀಲನೆಯಲ್ಲಿರುತ್ತದೆ. |
| ಆ | ಸರ್ಕಾರ ಇಲ್ಲಿಯವರೆಗೆ ಮೇಲ್ದರ್ಜೆಗೇರಿಸದಿರಲು ಕಾರಣವೇನು (ಮಾಹಿತಿ ನೀಡುವುದು); | ರಾಜೇಶ್ವರ ಗ್ರಾಮ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸುವುದಕ್ಕೆ ಸಂಬಂಧಿಸಿದಂತೆ- ಒಂದು ಗ್ರಾಮ ಪಂಚಾಯಿತಿ/ನಗರ ಸ್ಥಳೀಯ ಸಂಸ್ಥೆಗಳಿಂದ ಪುರಸಭೆಯನ್ನು ರಚಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ |
| ಇ | ನಗರಸಭೆಯಾಗಿ ಮತ್ತು ಪುರಸಭೆಯಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಯಾವಾಗ ಕ್ರಮಕೈಗೊಳ್ಳುವುದು (ಮಾಹಿತಿ ನೀಡುವುದು)? | ಕಲಂ-3 ರನ್ವಯ ಈ ಕೆಳಕಂಡ ಮಾನದಂಡವನ್ನು ಅನುಸರಿಸಲಾಗುತ್ತದೆ:<br>2011 ರ ಜನಗಣತಿಯನ್ವಯ-<br>a) ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರುವುದು;<br>b) ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದರ ಕಿ.ಮೀ. ವಿಸ್ತೀರ್ಣಕ್ಕೆ 1,500 ಕ್ಕಿಂತ ಕಡಿಮೆ ಇಲ್ಲದಿರುವುದು;<br>c) ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ |

| | | |
|---|---|---|
| | | ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು;<br>d) ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ 50% ಕ್ಕಿಂತ ಕಡಿಮೆ ಇಲ್ಲದಿರುವುದು.<br><br>ರಾಜೇಶ್ವರ ಗ್ರಾಮ ಪಂಚಾಯಿತಿಯಿಂದ ಪುರಸಭೆಯನ್ನು ರಚಿಸಲು ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ರವರಿಂದ ಸ್ವೀಕೃತವಾಗುವ ದಾಖಲೆಗಳನ್ವಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಅರ್ಹ ಪ್ರಸ್ತಾವನೆಯನ್ನು ಸಲ್ಲಿಸಿದಲ್ಲಿ ಮೇಲ್ತಿಳಿಸಿರುವ ಮಾನದಂಡದನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಪರಿಶೀಲಿಸಲು ಅವಕಾಶವಿರುತ್ತದೆ. |

**ಸಂಖ್ಯೆ:ನಅಇ 33 ಎಲ್‌ಸಿಕ್ಯೂ 2025**

(ರಹೀಂ ಖಾನ್)

**ಪೌರಾಡಳಿತ ಹಾಗೂ ಹಜ್ ಸಚಿವರು**